## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 681(625)

ಮಾನ್ಯ ಸದಸ್ಯರ ಹೆಸರು: ಡಾ|| ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 18.08.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಶೈಕ್ಷಣಿಕವಾಗಿ ಕೊನೆಯ ಸ್ಥಾನದಲ್ಲಿದ್ದು, ಇಲ್ಲಿಗೆ ಮಂಜೂರಾದ ಶಿಕ್ಷಕರ ಹುದ್ದೆಗಳಲ್ಲಿ 2892 ಶಿಕ್ಷಕರ (51%) ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು |
| ಆ) | ಈಗಾಗಲೇ ಎಸ್.ಎಸ್.ಎಲ್.ಸಿ.. ಮತ್ತು ಪಿ.ಯು.ಸಿ., ಪರೀಕ್ಷೆಗಳ ಫಲಿತಾಂಶದಲ್ಲಿ ಪ್ರತಿವರ್ಷ ಕೊನೆಯ ಸ್ಥಾನ ಪಡೆಯುತ್ತಿರುವ ಯಾದಗಿರಿ ಜಿಲ್ಲೆಗೆ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಶಿಕ್ಷಕರ ನೇಮಕಾತಿ ಮಾಡದಿರಲು ಕಾರಣಗಳೇನು: | **ಸರ್ಕಾರಿ ಪ್ರಾಥಮಿಕ/ ಪ್ರೌಢ ಶಾಲೆಗಳಿಗೆ ಸಂಬಂದಿಸಿದಂತೆ:-**<br>1. ಕಲ್ಯಾಣ ಕರ್ನಾಟಕ ಭಾಗದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ವೃಂದದ 4973 ಹುದ್ದೆಗಳ ನೇಮಕಾತಿಗಾಗಿ ದಿನಾಂಕ 21.03.2022 ರಂದು ಅಧಿಸೂಚಿಸಲಾಗಿತ್ತು;<br>2. ಈ ಹುದ್ದೆಗಳೆದುರಾಗಿ 4184 ಅಭ್ಯರ್ಥಿಗಳು ನಿಯಮಾನುಸಾರ ಅರ್ಹರಾಗಿದ್ದು, ಈ ಪೈಕಿ ನ್ಯಾಯಾಲಯದ ಪ್ರಕರಣಗಳನ್ನು ಹೊರತುಪಡಿಸಿ ಇದುವರೆಗೆ ನೇಮಕಾತಿ ಅಧಿಸೂಚನೆ/ ನಿಯಮಗಳಂತೆ ಅರ್ಹರಾದ 4145 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಶಾಲೆಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ. |
| ಇ) | ಕಲ್ಯಾಣ ಕರ್ನಾಟಕಕ್ಕೆ ಪ್ರತ್ಯೇಕ 5500 ಶಿಕ್ಷಕರ ನೇಮಕಾತಿ ಮಾಡಲಾಗುವುದೆಂದು ಸರ್ಕಾರ ಹೇಳಿಕೆ ನೀಡಿ ಒಂದು ವರ್ಷವಾದರೂ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸದಿರಲು ಕಾರಣಗಳೇನು; | |

| | | |
|---|---|---|
| ಈ) | ಶಿಕ್ಷಕರ ಶಿಕ್ಷಣಕ್ಕೆ ಆಧಾರವಾಗಿರುವಾಗ ಶಿಕ್ಷಕರ ಕೊರತೆಯಿಂದ ಹಿಂದುಳಿದ ಜಿಲ್ಲೆಗಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಕೈಗೊಂಡ ಕ್ರಮಗಳೇನು: (ಮಾಹಿತಿ ನೀಡುವುದು) | 3. ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024, ದಿನಾಂಕ:07.10.2024ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರಾಥಮಿಕ ಶಾಲೆಗಳ 4882 ಹಾಗೂ ಪ್ರೌಢಶಾಲೆಗಳ 385 ಹುದ್ದೆಗಳನ್ನು ಸೇರಿ ಒಟ್ಟು 5267 ಹುದ್ದೆಗಳನ್ನು ಮಾತ್ರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 388 ಸೇನೆನಿ 2024, ದಿನಾಂಕ:25.11.2024 ರ ಆದೇಶದಲ್ಲಿ ದಿನಾಂಕ:28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ನೇಮಕಾತಿ ಅಧಿಸೂಚನೆ ಹೊರಡಿಸಲು ಸಾಧ್ಯವಾಗಿರುವುದಿಲ್ಲ.<br><br>5. ಕಲ್ಯಾಣ ಕರ್ನಾಟಕ ಪ್ರದೇಶವೂ ಸೇರಿದಂತೆ ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರತಿ ವರ್ಷದಂತೆ ಪ್ರಸ್ತುತ ಸಾಲಿನಲ್ಲಿಯೂ ಸಹ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ತಾತ್ಕಾಲಿಕವಾಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಅನುಕ್ರಮವಾಗಿ 12087 ಮತ್ತು 3338 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ. |

**ಇಪಿ 91 ಪಿಎಂಎ 2025**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು